# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28 ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 22-02-2021 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು**

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀ ಶ್ರೀನಿವಾಸ್, ಕಂದಾಯ ನಿರೀಕ್ಷಕರು,
6. ಶ್ರೀ ನಂಜುಂಡಯ್ಯ, ಸಹಾಯಕ ಅಭಿಯಂತರರು, ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಇಲಾಖೆ
7. ಶ್ರೀ ಕ್ಯಾಪ್ಟನ್ ಸುಬ್ರಮಣಿ,
8. ಶ್ರೀ ಮುರಳೀಧರ, ಸ್ಥಳೀಯರು,
9. ಶ್ರೀ ವಿನೋದ್‌ಕುಮಾರ್, ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಮುರಳೀಧರ್, ಸ್ಥಳೀಯರು ಮಾತನಾಡುತ್ತಾ,**

- ವಾರ್ಡ್ ವ್ಯಾಪ್ತಿಯ ಬಾಣಸವಾಡಿ ಮುಖ್ಯರಸ್ತೆಗಳಲ್ಲಿ ಬೀದಿ ದೀಪಗಳು ಸರಿಯಾಗಿ ಉರಿಯದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ, ಇದನ್ನು ಕೂಡಲೇ ಸರಿಪಡಿಸಲು ಸಭೆಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯ ಐ.ಓ.ಸಿ ಸರ್ವಿಸ್ ರಸ್ತೆಯಲ್ಲಿ ರಸ್ತೆ ಗುಂಡಿಗಳು ಇದ್ದು, ಇದರಿಂದ ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದರಿಂದ, ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಬೃಹತ್ ರಸ್ತೆ ಮೂಲಭೂತ ಸೌಕರ್ಯ ರವರಿಗೆ ಮಾಹಿತಿ ನೀಡಿ, ರಸ್ತೆಗುಂಡಿಗಳನ್ನು ಮುಚ್ಚಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯ ಐ.ಓ.ಸಿ ಬ್ರಿಡ್ಜ್ ಕೆಳಗೆ ಗಿಡಗಳು ಬೆಳೆದಿದ್ದು, ಅವುಗಳನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.
- ಕೋವಿಡ್ ಪ್ರಕರಣಗಳು ಇತ್ತೀಚೆಗೆ ಹೆಚ್ಚಾಗುತ್ತಿದ್ದು, ಈ ಬಗ್ಗೆ ಸಾರ್ವಜನಿಕರು ಮಾಸ್ಕ್ ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಜನಜಾಗೃತಿ ಮೂಡಿಸಲು ಸಭೆಗೆ ತಿಳಿಸಿದರು.
- ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ಪಾದಾಚಾರಿ ಮಾರ್ಗದಲ್ಲಿ ತರಕಾರಿ ಮಾರಾಟವನ್ನು ತಳ್ಳುವ ಗಾಡಿಗಳಿಂದ ಮಾಡುತ್ತಿದ್ದು, ಇದನ್ನು ತಡೆಗಟ್ಟಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಹೆಚ್ಚಾಗಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗೆ ಮಾಹಿತಿ ನೀಡಿ, ಬೀದಿ ನಾಯಿಗಳನ್ನು ನಿಯಂತ್ರಿಸಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದರು.

**2) ಶ್ರೀ ಕ್ಯಾಪ್ಟನ್ ಸುಬ್ರಮಣಿ, ಮಾತನಾಡುತ್ತಾ,**

- ವಾರ್ಡ್ ವ್ಯಾಪ್ತಿಯಲ್ಲಿ ಎಷ್ಟು ಬೋರ್‌ವೆಲ್‌ಗಳು ಇವೆ, ಅವುಗಳಲ್ಲಿ ಚಾಲ್ತಿಯಲ್ಲಿರುವ ಬೋರ್‌ವೆಲ್‌ಗಳು ಹಾಗೂ ಕಾರ್ಯನಿರ್ವಹಿಸದೇ ಇರುವ ಬೋರ್‌ವೆಲ್‌ಗಳ ಬಗ್ಗೆ ವಾಲ್‌ಮೆನ್‌ಗಳಿಂದ ಮಾಹಿತಿಯನ್ನು ಪಡೆದು. ಮುಂದಿನ ಸಭೆಯಲ್ಲಿ ಮಾಹಿತಿ ನೀಡಲು ಸಭೆಯಲ್ಲಿ ಪ್ರಸ್ತಾಪಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಸಾಯಂಕಾಲ 6.00 ಗಂಟೆಗೆ ಮುಚ್ಚುತ್ತಿದ್ದು, ಅದನ್ನು ರಾತ್ರಿ 8.00 ಗಂಟೆಗೆ ವಿಸ್ತೀರ್ಣಗೊಳಿಸಿದರೆ ಸಾರ್ವಜನಿಕರಿಗೆ ಅನುಕೂಲವಾಗುತ್ತದೆ. ಇದನ್ನು ಕಾರ್ಯಗತಗೊಳಿಸಲು ಸಭೆಗೆ ತಿಳಿಸಿದರು.
- ಕೋವಿಡ್ ಪ್ರಕರಣಗಳು ಇತ್ತೀಚೆಗೆ ಹೆಚ್ಚಾಗುತ್ತಿದ್ದು, ಈ ಬಗ್ಗೆ ಸಾರ್ವಜನಿಕರು ಮಾಸ್ಕ್ ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ವಾರ್ಡಿನಲ್ಲಿ ನಿಯೋಜಿಸಿರುವ ಮಾರ್ಷಲ್‌ಗಳಿಂದ ದಂಡ ವಿಧಿಸಲು ಹಾಗೂ ಜನಜಾಗೃತಿ ಮೂಡಿಸಲು ಸಭೆಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬಾಕಿ ಇರುವ ಕಾಮಗಾರಿಗಳನ್ನು ಶೀಘ್ರವಾಗಿ ಪ್ರಾರಂಭಿಸಿ, ಪೂರ್ಣಗೊಳಿಸಲು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಬಿಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಕುಡಿಯುವ ನೀರಿನ ಸಮಸ್ಯೆಯ ಬಗ್ಗೆ ಹಿಂದಿನ ಸಭೆಗಳಲ್ಲಿ ಚರ್ಚಿಸಿರುವಂತೆ ವಾರಕ್ಕೆ ಮೂರು ಬಾರಿ ನೀರು ಸರಬರಾಜು ಮಾಡಲು ಹಾಗೂ ರಾತ್ರಿ ಸಮಯದಲ್ಲಿ ಬಿಡುವ ನೀರನ್ನು ಹಗಲು ವೇಳೆಯಲ್ಲಿ ಬಿಡಲು ಕ್ರಮ ವಹಿಸಲು ತಿಳಿಸಲಾಗಿದ್ದು, ಈ ಬಗ್ಗೆ ವಹಿಸಿರುವ ಕ್ರಮದ ಬಗ್ಗೆ ಮುಂದಿನ ವಾರ್ಡ್ ಸಭೆಯಲ್ಲಿ ತಿಳಿಸಲು ತಿಳಿಸಿದರು. ಹಾಗೂ ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಿದರು.

ಹಾಗೂ ಕಮ್ಮನಹಳ್ಳಿ ಮುಖ್ಯರಸ್ತೆಯ ಪಾದಾಚಾರಿ ಮಾರ್ಗದಲ್ಲಿ ಇಟ್ಟಿರುವ ತಳ್ಳುವ ಗಾಡಿಗಳ ಮಾಲೀಕರಿಗೆ ತಾವುಗಳು ಮುಖ್ಯರಸ್ತೆಯಲ್ಲಿ ವ್ಯಾಪಾರ ಮಾಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಅವುಗಳನ್ನು ಕೂಡಲೇ ತೆರವುಗೊಳಿಸಲು ಆರೋಗ್ಯ ನಿರೀಕ್ಷಕರಿಗೆ ತಿಳಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಿದರು.

**ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ,**

**ನೋಡೆಲ್ ಅಧಿಕಾರಿ**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

**ಪ್ರತಿಯನ್ನು**

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ

3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ.
5) ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ
6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು.ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
11) ಸಹಾಕಯ ಕಂದಾಯ ಅಧಿಕಾರಿ. ಮಾರುತಿ ಸೇವಾ ನಗರ ಉಪವಿಭಾಗ
12) ಕಲ್ಯಾಣಾದಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
13) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
14) ಪೋಲಿಸ್ ಇನ್ಸ್‌ಪೆಕ್ಟರ್, ಬಾಣಸವಾಡಿ.
15) ಪೋಲಿಸ್ ಇನ್ಸ್‌ಪೆಕ್ಟರ್,(ಸಂಚಾರಿ), ಬಾಣಸವಾಡಿ.
16) ಕಛೇರಿ ಪ್ರತಿ.